ಅ) ಮೂಡಿಗೆರೆ ತಾಲ್ಲೂಕಿನಲ್ಲಿ ಎಷ್ಟು ಸಮಸ್ಯಾತ್ಮಕ ಗ್ರಾಮಗಳಿವೆ.

ಆ) ಇಂತಹ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಸರ್ಕಾರವು ಏನು ಕ್ರಮ ತೆಗೆದುಕೊಂಡಿದೆ.

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಕೇಂದ್ರ ಸರ್ಕಾರದ ನಿಯಮಾವಳಿ ಪ್ರಕಾರ ಮೂಡಿಗೆರೆ ತಾಲ್ಲೂಕಿನಲ್ಲಿ 1985ರಲ್ಲಿ ಗುರುತಿಸಲಾದ ಸಮಸ್ಯಾತ್ಮಕ ಹಳ್ಳಿಗಳ: ಜನವಸತಿಗಳ ಸಂಖ್ಯೆ 196.

ಆ) ಸಮಸ್ಯಾತ್ಮಕ ಗ್ರಾಮಗಳಿಗೂ ಜನವಸತಿಗಳಿಗೂ 1.60 ಕಿ.ಮೀ. ಒಳಗೆ ಕುಡಿಯುವ ನೀರಿನ ಮೂಲ (ಜಲಮೂಲ) ವನ್ನು ಒದಗಿಸಲಾಗಿದೆ.

ಅರಕಲಗೂಡಿನ ಪ್ರಥಮ ದರ್ಜೆ ನ್ಯಾಯಾಲಯಕ್ಕೆ ಕಟ್ಟಡ

152 - ಶ್ರೀ ಎ.ಟಿ.ರಾಮಸ್ವಾಮಿ (ಅರಕಲಗೂಡು): ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಅರಕಲಗೂಡಿನಲ್ಲಿರುವ ಪ್ರಥಮ ದರ್ಜೆ ನ್ಯಾಯಾಲಯಕ್ಕೆ ಕಟ್ಟಡವಿಲ್ಲದೆ ತೊಂದರೆಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಅರಕಲಗೂಡಿನಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯವರು ನಿರ್ಮಿಸಿರುವ ನೂತನ ಬಸ್ ನಿಲ್ದಾಣವನ್ನು ನ್ಯಾಯಾಲಯದ ಕಟ್ಟಡಕ್ಕೆ ವಹಿಸಿಕೊಳ್ಳುವಂತೆ ಪ್ರಸ್ತಾವನೆ ಎಂದಿನಿಂದ ನಡೆದಿರುತ್ತದೆ.

ಇ) ಇದಕ್ಕೆ ವಿಳಂಬವಾಗಲು ಕಾರಣಗಳೇನು?

ಈ) ವಿಳಂಬವನ್ನು ಪರಿಹರಿಸಲು ಸರ್ಕಾರವು ಏನು ಕ್ರಮ ಕೈಗೊಂಡಿರುತ್ತದೆ?

ಶ್ರೀ ಹಾರನಹಳ್ಳಿ ರಾಮಸ್ವಾಮಿ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):

ಅ) ಹೌದು.

ಆ) ಅರಕಲಗೂಡಿನಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯವರು ನಿರ್ಮಿಸಿರುವ ನೂತನ ಬಸ್ ನಿಲ್ದಾಣವನ್ನು ನ್ಯಾಯಾಲಯ ಕಟ್ಟಡಕ್ಕೆ ರೂ. 12,85,04-5-00ಖರೀದಿಸುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ.

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ.

ಜಿಲ್ಲಾ ಪರಿಷತ್ತು ಮತ್ತು ಮಂಡಲ ಪಂಚಾಯಿತಿ ಚುನಾವಣೆ

151 - ಶ್ರೀ ಎ.ಟಿ. ರಾಮಸ್ವಾಮಿ (ಅರಕಲಗೂಡು): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಿಲ್ಲಾ ಪರಿಷತ್ ಮತ್ತು ಮಂಡಲ ಪಂಚಾಯಿತಿ ಚುನಾವಣೆಗಳನ್ನು ಯಾವಾಗ ನಡೆಸಲು ಸರ್ಕಾರ ಉದ್ದೇಶಿಸಿದೆ.

ಆ) ಚುನಾವಣೆಗೂ ಮುಂಚೆ ಜಿಲ್ಲಾ ಪರಿಷತ್ ಮತ್ತು ಮಂಡಲ ಪಂಚಾಯಿತಿ ಕ್ಷೇತ್ರಗಳ ಪುನರ್ ವಿಂಗಡಣೆ ಮಾಡಲಾಗುವುದೇ?

ಇ) ಮಾಡುವುದಾದಲ್ಲಿ ಕ್ಷೇತ್ರಗಳ ಪುನರ್ ವಿಂಗಡಣೆಗೆ ಎಷ್ಟು ಕಾಲಾವಕಾಶ ಬೇಕಾಗುತ್ತದೆ.

ಈ) ಜಿಲ್ಲಾ ಪರಿಷತ್ ಮತ್ತು ಮಂಡಲ ಪಂಚಾಯತಿ ನಿಯಮಗಳಿಗೆ ತಿದ್ದುಪಡಿಗಳನ್ನು ತರಲು ಸರ್ಕಾರವು ಉದ್ದೇಶಿಸಿರುತ್ತದೆಯೇ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

ಆ) -ಅದೇ-

ಇ) -ಅದೇ-

ಈ) -ಅದೇ-

ಶಿಕಾರಿಪುರ ಪಟ್ಟಣದಲ್ಲಿ ಮಿನಿ ವಿಧಾನಸೌಧ.

216 - ಶ್ರೀ ಬಿ.ಎಸ್.ಯಡಿಯೂರಪ್ಪ (ಶಿಕಾರಿಪುರ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿಕಾರಿಪುರ ಪಟ್ಟಣದಲ್ಲಿ "ಮಿನಿ ವಿಧಾನ ಸೌಧ" ಕಟ್ಟಲು ಸರ್ಕಾರವು ತೀರ್ಮಾನಿಸಿದೆಯೇ?

ಆ) ಹಾಗಿದ್ದರೆ ಈ ಕೆಲಸವನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು):

ಅ) ಹೌದು.

ಆ) 45 ಲಕ್ಷ ರೂ. ಗಳಿಗೆ ಆಡಳಿತಾತ್ಮಕ ಮಂಜೂರಾತಿಯನ್ನು ಅದೇ ಸಂಖ್ಯೆ ಆರ್‌ಡಿ 78 ಡಬ್ಲ್ಯೂಬಿಆರ್ 90 ದಿನಾಂಕ 28-9-92 ರಲ್ಲಿ ನೀಡಿದ್ದು, ಈಗಾಗಲೇ ಗುತ್ತಿಗೆ ಸಮಾಲನ್ನು ದಿನಾಂಕ 8-1-1993ಕ್ಕೆ ಕೊನೆದಿನವಾಗಿ ಆಹ್ವಾನಿಸಿದೆ. ಗುತ್ತಿಗೆ ಸಮಾಲ್ ಅನುಮೋದನೆ ಆದಕೂಡಲೆ ಕಾರ್ಯ ಪ್ರಾರಂಭಿಸಲಾಗುವುದು.

ಜಿಲ್ಲಾ ಪರಿಷತ್ತು ಮತ್ತು ಮಂಡಲ ಪಂಚಾಯಿತಿಗಳ ಬಗ್ಗೆ

218 - ಶ್ರೀ ವೈ.ಕೆ. ರಾಮಯ್ಯ (ಕುಣಿಗಲ್): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕದಲ್ಲಿ ಜಿಲ್ಲಾ ಪರಿಷತ್ ಮತ್ತು ಮಂಡಲ ಪಂಚಾಯ್ತಿಗಳ ಚುನಾಯಿತ ಪ್ರತಿನಿಧಿಗಳ ಕಾಲಾವಧಿ ಮುಗಿದ ಮೇಲೆ ಈ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ಮಾಡದೆ ಇರಲು ಕಾರಣವೇನು?

ಆ) ಈ ಸಂಸ್ಥೆಗಳಿಗೆ ಸಲಹಾ ಸಮಿತಿಗಳನ್ನು ನೇಮಿಸಲು ಸರ್ಕಾರಕ್ಕೆ ಉದ್ದೇಶವಿದೆಯೇ?

ಇ) ಇದ್ದಲ್ಲಿ ಈ ಕ್ರಮ ಜನತಂತ್ರ ವಿರೋಧಿ ಕ್ರಮ ಎಂಬುದು ಸರ್ಕಾರಕ್ಕೆ ತಿಳಿದಿಲ್ಲವೆ?

ಈ) ಅಂತಹಾ ಸಲಹಾ ಸಮಿತಿಯನ್ನು ನೇಮಿಸುವಂತಹ ಆಲೋಚನೆಯನ್ನು ಕೈಬಿಟ್ಟು ಸರ್ವೋಚ್ಚನ್ಯಾಯಾಲಯದ ತೀರ್ಮಾನದ ಪ್ರಕಾರ ಈ ಸಂಸ್ಥೆಗಳಿಗೆ ಯಾವ ದಿನಾಂಕದಂದು ಚುನಾವಣೆ ನಡೆಸಲಾಗುವುದು.